ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ರಾಜ್ಯದಲ್ಲಿ ಪಡಿತರ ಚೀಟಿ ಹಾಗೂ ಪಡಿತರ ವಿತರಣೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

680 (762) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಪಡಿತರ ವಿತರಣಾ ವ್ಯವಸ್ಥೆಯನ್ನು ಸದೃಢ ಹಾಗೂ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿ ಒಟ್ಟು ಪಡಿತರ ಕಾರ್ಡುದಾರರಲ್ಲಿ ಬಿಪಿಎಲ್ ಕಾರ್ಡು ಹೊಂದಿದವರ ಸಂಖ್ಯೆ ಹಾಗೂ ಎಪಿಎಲ್ ಕಾರ್ಡು ಹೊಂದಿದವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಿಪಿಎಲ್ ಕಾರ್ಡುದಾರರಿಗೆ ನೀಡುವ ಪಡಿತರದ ವಿವರ ನೀಡುವುದು;

(ಈ) ಹಲವು ಜಿಲ್ಲೆಗಳಲ್ಲಿ ಅಪಾರ ಪ್ರಮಾಣದ ಪಡಿತರವು ವಿತರಣೆಯಾಗದೇ ಉಳಿಯುತ್ತಿದ್ದು, ಅದನ್ನು ಸರ್ಕಾರ ಯಾವ ರೀತಿ ಉಪಯೋಗ ಮಾಡುತ್ತಿದೆ;

(ಉ) ಪ್ರಸಕ್ತ ಸಾಲಿನಲ್ಲಿ ಎಷ್ಟು ನಕಲಿ ಪಡಿತರ ಚೀಟಿಗಳನ್ನು ಗುರುತಿಸಲಾಗಿದೆ;

(ಊ) ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಯೋಜನೆಯನ್ನು ಘೋಷಿಸಿದ್ದು, ಇದರ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?